# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 97 |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 12-09-2022 |

| | **ಪ್ರಶ್ನೆ** | **ಉತ್ತರ** |
|---|---|---|
| (ಅ) | ಕುವೆಂಪು ವಿಶ್ವವಿದ್ಯಾಲಯ ಶೈಕ್ಷಣಿಕ ವೇಳಾ ಪಟ್ಟಿಯಲ್ಲಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕುವೆಂಪು ವಿಶ್ವವಿದ್ಯಾಲಯದ ಶೈಕ್ಷಣಿಕ ವೇಳಾ ಪಟ್ಟಿಯಲ್ಲಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆ. |
| (ಆ) | 2, 4 ಮತ್ತು 6ನೇ ಸೆಮಿಸ್ಟರ್‌ಗಳಿಗೆ ದಿನಾಂಕ: 17-09-2022ರಂದು ಕೊನೆಯ ಕೆಲಸದ ದಿನ (Working day) ಈ ಮಧ್ಯೆ 1ನೇ ಸೆಮಿಸ್ಟರ್ ಕೂಡ ದಿನಾಂಕ: 01-09-2022ರಂದು ಪ್ರಾರಂಭ ಮಾಡಲು ಸರ್ಕಾರ ಆದೇಶ ಹೊರಡಿಸಿದ್ದು, ಪರೀಕ್ಷೆಗಳು ಆರಂಭ ಆಗುವುದರಿಂದ ಕೊಠಡಿಗಳ ಹಾಗೂ ಸಿಬ್ಬಂದಿಗಳ ಕೊರತೆ ಆಗುತ್ತಿರುವ ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸರ್ಕಾರದ ಆದೇಶ ಸಂ. ಇಡಿ 217 ಯುಎನ್‌ಇ 2022, ದಿನಾಂಕ:17-08-2022ರಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ಅನುದಾನ/ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) 2022-23ನೇ ಸಾಲಿನ ಸ್ನಾತಕ ತರಗತಿಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 1ನೇ ಸೆಪ್ಟೆಂಬರ್ 2022ರಿಂದ ಪ್ರಾರಂಭ ಆಗುವಂತೆ ಮತ್ತು ಪದವಿ ಕಾಲೇಜುಗಳಲ್ಲಿನ ಪ್ರವೇಶಾತಿ ಪ್ರಕ್ರಿಯೆಯನ್ನು 15ನೇ ಸೆಪ್ಟೆಂಬರ್ ವರೆಗೆ ವಿಸ್ತರಿಸಿ ಆದೇಶಿಸಿಸಲಾಗಿರುತ್ತದೆ.<br><br>ಮುಂದುವರೆದು, ವಿಶ್ವವಿದ್ಯಾಲಯವು ಹೊಸ ಶೈಕ್ಷಣಿಕ ವೇಳಾಪಟ್ಟಿಯನುಸಾರ 2, 4 ಮತ್ತು6ನೇ ಸೇಮಿಸ್ಟರ್ ಪರೀಕ್ಷೆಗಳು ಮತ್ತು 1ನೇ ಸೆಮಿಸ್ಟರ್ ತರಗತಿಗಳು ಏಕಕಾಲದಲ್ಲಿ ನಡೆಯುವುದರಿಂದ ಯಾವುದಾದರರು ಕಾಲೇಜಿನಲ್ಲಿ ಕೊಠಡಿಗಳ ಹಾಗೂ ಸಿಬ್ಬಂದಿಗಳ ಕೊರತೆ ಇದ್ದಲ್ಲಿ ಅಂತಹ ಕಡೆ, ಸರದಿ ಆಧಾರದಲ್ಲಿ (Shift Basis) ತರಗತಿಗಳನ್ನು ನಡೆಸುವುದರ ಮೂಲಕ ಕೊಠಡಿಗಳ ಹಾಗೂ ಸಿಬ್ಬಂದಿಗಳ ಕೊರತೆ ಉಂಟಾಗದಂತೆ ಕ್ರಮವಹಿಸಲಾಗಿದೆ. |

ಸಂಖ್ಯೆ: ಇಡಿ 87 ಯುಎಸ್‌ವಿ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ - ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು